# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 78

**ಸದಸ್ಯರ ಹೆಸರು** : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.

(ವಿಧಾನಸಭೆಯಿಂದ ಚುನಾಯಿತರಾದವರು)

**ಉತ್ತರಿಸಬೇಕಾದ ದಿನಾಂಕ** : 09/12/2024

**ಉತ್ತರಿಸುವ ಸಚಿವರು** : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು ಶಿಕ್ಷಣ ಇಲಾಖೆ ಕಛೇರಿಗೆ ಮಂಜೂರಾಗಿರುವ ಅಧಿಕಾರಿಗಳು/ ಸಿಬ್ಬಂದಿಗಳ ಬಹುತೇಕ ಹುದ್ದೆಗಳು ಖಾಲಿ ಇದ್ದು ಅಧೀನ ಶಾಲೆಗಳ ಸಿಬ್ಬಂದಿಗಳನ್ನು ತಾತ್ಕಾಲಿಕವಾಗಿ ನಿಯೋಜನೆ ಮಾಡಿಕೊಂಡು ಕೆಲಸ ನಿರ್ವಹಣೆ ಮಾಡಬೇಕಾದ ಅನಿವಾರ್ಯತೆ ಸೃಷ್ಟಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:</td><td rowspan="2">ಬಂದಿದೆ.<br><br>ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು ಕಛೇರಿಗೆ ಮಂಜೂರಾಗಿರುವ, ಕಾರ್ಯ ನಿರ್ವಹಿಸುತ್ತಿರುವ ಮತ್ತು ಖಾಲಿ ಹುದ್ದೆಗಳ ವಿವರ ಈ ಕೆಳಗಿನಂತಿದೆ.<br><br><table><tr><th>ಮಂಜೂರಾದ ಹುದ್ದೆಗಳು</th><th>ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳು</th><th>ಖಾಲಿ ಹುದ್ದೆಗಳು</th></tr><tr><td>22</td><td>07</td><td>15</td></tr></table></td></tr>
<tr><td>ಆ</td><td>ಬಂದಿದ್ದಲ್ಲಿ ಸದರಿ ಕಛೇರಿಗೆ ಮಂಜೂರಾಗಿರುವ ಹಾಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)</td></tr>
<tr><td>ಇ</td><td>ಬೆಳ್ತಂಗಡಿ ಭೌಗೋಳಿಕವಾಗಿ ಜಿಲ್ಲೆಯ ಅತಿ ದೊಡ್ಡ ತಾಲ್ಲೂಕು ಆಗಿದ್ದು ಶೈಕ್ಷಣಿಕ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ನಡೆಸಲು ಅತ್ಯಗತ್ಯವಾಗಿ ಬೇಕಾಗಿರುವ ಸಿಬ್ಬಂದಿಯ ಕೊರತೆ ಬಹಳ ಇರುವುದರಿಂದ ಹಾಲಿ ಖಾಲಿ ಇರುವ ಹುದ್ದೆಗಳಿಗೆ ಕೂಡಲೇ ಪೂರ್ಣಕಾಲಿಕ ಅಧಿಕಾರಿಗಳು / ಸಿಬ್ಬಂದಿಗಳನ್ನು ನಿಯುಕ್ತಿಗೊಳಿಸಲು ಸರ್ಕಾರ ಕೂಡಲೇ ಕ್ರಮ ವಹಿಸುವುದೇ?</td><td>ಶಾಲಾ ಶಿಕ್ಷಣ ಇಲಾಖೆಯ ಮುಖ್ಯ ಶಿಕ್ಷಕರು / ತತ್ಸಮಾನ ವೃಂದದ ಅಧಿಕಾರಿಗಳಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1958ರ ನಿಯಮ–32 ರಡಿ ಗ್ರೂಪ್–ಎ ಕಿರಿಯ ಶ್ರೇಣಿಯ ಶಿಕ್ಷಣಾಧಿಕಾರಿ / ತತ್ಸಮಾನ ವೃಂದಕ್ಕೆ ಸ್ವತಂತ್ರ ಪ್ರಭಾರದಲ್ಲಿಡಲು ಕ್ರಮವಹಿಸಲಾಗುತ್ತಿದ್ದು, ಸದ್ಯದಲ್ಲಿಯೇ ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿ ಹುದ್ದೆಯನ್ನು ಭರ್ತಿ ಮಾಡಲಾಗುವುದು.</td></tr>
</table>

| | | |
|---|---|---|
| | | ಖಾಲಿ ಇರುವ ಬೋಧಕೇತರ ಹುದ್ದೆಗಳನ್ನು ಅನುಕಂಪದ ಆಧಾರದ ಮೇರೆಗೆ ನೇಮಕಾತಿ, ವರ್ಗಾವಣೆ ಮತ್ತು ಬಡ್ತಿ ಮೂಲಕ ಭರ್ತಿ ಮಾಡಲು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಕಛೇರಿ ಹಂತದಲ್ಲಿ ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ:** ಇಪಿ 54 ಪಿಡಿಬಿ 2024

**(ಎಸ್.ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು